

ಅರುಣ ಪಿ. ಭಟ್ಟ

## ವಾರದ ಭವಿಷ್ಯ 4.6.2020ರಿಂದ 10.6.2020ರವರೆಗೆ




ವಾರದ ಆರಂಭದಲ್ಲಿ ವೃತ್ತಿಜೀವನದಲ್ಲಿ ಮಹತ್ತರ ಬದಲಾವಣೆಯನ್ನು ನಿರೀಕ್ಷೆ ಮಾಡಬಹುದು. ಸರ್ಕಾರ ಮತ್ತು ಖಾಸಗಿ ವಲಯ ಎರಡರಲ್ಲೂ ಯಶಸ್ಸು ಪಡೆಯುವ ಅವಕಾಶ ಹೆಚ್ಚಿದೆ. ಆದರೆ ಇದಕ್ಕಾಗಿ ಹೆಚ್ಚಿನ ಪರಿಶ್ರಮ ಹಾಕಬೇಕು. ಸೇವಾ ವಲಯ ಅಥವಾ ವ್ಯಾಪಾರದಲ್ಲಿ ಲಾಭದ ಪ್ರಮಾಣ ಹೆಚ್ಚಲಿದೆ. ಶುಭದಿನ: 6. ನವದುರ್ಗಾ ಆರಾಧನೆ ಮಾಡಿರಿ.




ಸಾಮಾಜಿಕ ಸ್ಥಾನಮಾನ ಹಾಗೂ ರಾಜಕೀಯದಲ್ಲಿ ಉತ್ತಮ ಹುದ್ದೆ ಪಡೆಯಬಹುದು. ಏಳ್ಗೆ ಕಾಣಲಿದ್ದು, ಪ್ರಗತಿಯ ಕಡೆಗೆ ಹೆಜ್ಜೆ ಹಾಕಲಿದ್ದೀರಿ. ವಾರದ ಶುರುವಿನಲ್ಲಿ ಅದೃಷ್ಟ ನಿಮ್ಮ ಪಾಲಿಗೆ ಇರುತ್ತದೆ. ಉದ್ಯೋಗ ಸ್ಥಳದಲ್ಲೂ ನಿಮ್ಮ ಬಗ್ಗೆ ಗೌರವ ಹೆಚ್ಚಳವಾಗುತ್ತದೆ. ಆರೋಗ್ಯ ಉತ್ತಮವಾಗಿರುತ್ತದೆ. ಸಹೋದ್ಯೋಗಿಗಳ ಪ್ರಗತಿಗೆ ಸಹಕಾರ ನೀಡಲಿದ್ದೀರಿ. ಶುಭದಿನ 8. ಶ್ರೀರಾಮರಕ್ಷಾ ಸ್ತೋತ್ರ ಪಠಣ ಮಾಡಿರಿ.




ವಾರದ ಶುರು ಉತ್ತಮವಾಗಿರುತ್ತದೆ. ಆಪ್ತರ ಜತೆಗಿನ ನಿಮ್ಮ ಬಾಂಧವ್ಯಕ್ಕೆ ಇನ್ನಷ್ಟು ಗಟ್ಟಿತನ ಬರುತ್ತದೆ. ಸುಮಧುರ ಕ್ಷಣಗಳನ್ನು ಕಳೆಯಲಿದ್ದೀರಿ. ಕುಟುಂಬದಲ್ಲಿನ ಸೌಹಾರ್ದ ಎಷ್ಟು ಮುಖ್ಯ ಎಂಬುದು ಅರಿವಿಗೆ ಬರುತ್ತದೆ. ಆ ಕಾರಣಕ್ಕೆ ಈ ಹಿಂದೆ ಕುಟುಂಬದಲ್ಲಿದ್ದ ಮನಸ್ತಾಪಗಳನ್ನು ದೂರ ಮಾಡುವುದಕ್ಕೆ ಪ್ರಯತ್ನ ಮಾಡಲಿದ್ದೀರಿ. ಶುಭದಿನ 9. ಶಿವಕವಚ ಸ್ತುತಿಸಿರಿ.




ವಾರದ ಆರಂಭದಲ್ಲಿ ವೈವಾಹಿಕ ಜೀವನದಲ್ಲಿ ಸುಮಧುರ ಕ್ಷಣಗಳನ್ನು ಕಳೆಯಲಿದ್ದೀರಿ. ದೈಹಿಕ ಸದೃಢತೆ ಹಾಗೂ ಆರೋಗ್ಯ ಉತ್ತಮವಾಗಿ ಇರಲಿದೆ. ವಾರದ ದ್ವಿತೀಯಾರ್ಧದಲ್ಲಿ ಹಲವು ಗುರಿಗಳನ್ನು ಸಾಧಿಸುತ್ತೀರಿ. ವೃತ್ತಿಪರರು ಹೆಚ್ಚು ಪರಿಶ್ರಮ ಹಾಕಿ ಕೆಲಸ ಮಾಡಲಿದ್ದೀರಿ. ಇದಕ್ಕಾಗಿ ಕೆಲವು ತಂತ್ರಗಳನ್ನು ಸಹ ಅಳವಡಿಸಿಕೊಳ್ಳಲಿದ್ದೀರಿ. ಶುಭದಿನ 7. ಹನುಮಾನ್ ಚಾಲೀಸ್ ಓದಿರಿ.




ಕೌಟುಂಬಿಕ ವಿಷಯದಲ್ಲಿ ಪ್ರಗತಿ. ನಿಮ್ಮ ವಿರೋಧಿಗಳ ಷಡ್ಯಂತ್ರವನ್ನು ಮುರಿಯುವಲ್ಲಿ ಸಫಲರಾಗುವಿರಿ. ರಾಜಕಾರಣದಲ್ಲಿ ವಿರೋಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ವಾರದ ದ್ವಿತೀಯಾರ್ಧದಲ್ಲಿ ವಿವಾಹ ವಯಸ್ಕರಿಗೆ ಸೂಕ್ತ ಸಂಬಂಧಗಳು ದೊರೆಯುವ ಸಾಧ್ಯತೆ ಇದೆ. ಇನ್ನು ವಿವಾಹಿತರಾಗಿದ್ದಲ್ಲಿ ಶುಭ ಸುದ್ದಿ ಕೇಳುವ ಯೋಗಗಳಿವೆ. ಶುಭದಿನ 9. ವಿಷ್ಣು ಸಹಸ್ರನಾಮ ಪಠಿಸಿರಿ.




ವಾರದ ಶುರುವಿನಲ್ಲಿ ಶೈಕ್ಷಣಿಕ ಕ್ಷೇತ್ರದಲ್ಲಿ ಪ್ರಗತಿ. ಬರಹಗಾರರ ಬರವಣಿಗೆ ಮತ್ತಷ್ಟು ಆಕರ್ಷಕವಾಗಲಿದೆ. ಸ್ನೇಹ ಸಂಬಂಧಗಳು ಮತ್ತಷ್ಟು ಗಾಢವಾಗಲಿದೆ. ವಾರದ ಮಧ್ಯ ಭಾಗದಲ್ಲಿ ನಾನಾ ಕಾರಣಗಳಿಗೆ ಚಿಂತೆ ಕಾಡುತ್ತದೆ. ತಲೆ ನೋವು, ಕಾಲು ನೋವು ಸೇರಿದಂತೆ ಇತರ ಅನಾರೋಗ್ಯ ಸಮಸ್ಯೆಗಳು ಕಾಡಬಹುದು. ಆದರೆ ಅದು ಬಹಳ ಕಾಲ ಇರುವುದಿಲ್ಲ. ಶುಭದಿನ 6. ಸೌಂದರ್ಯ ಲಹರಿ ಪಠಿಸಿರಿ.




ವಾರದ ಶುರುವಿನಲ್ಲಿ ಉತ್ತಮ ಪ್ರಗತಿ ಇದೆ. ಈಗ ಉದ್ಯೋಗ ಜೀವನ ಆರಂಭಿಸಬೇಕು ಅಂತಿರುವವರಿಗೆ ಉತ್ತಮ ಅವಕಾಶ ದೊರೆಯಲಿದೆ. ಹಲವು ಬಗೆಯಲ್ಲಿ ಯಶಸ್ಸು ಕಾಣಲಿಕ್ಕೆ ಅವಕಾಶಗಳು ದೊರೆಯಲಿವೆ. ವೈವಾಹಿಕ ಜೀವನದಲ್ಲಿ ಸಂತೋಷ, ಸಂಭ್ರಮ ಪಡಲಿದ್ದೀರಿ. ಈ ಹಿಂದೆ ಸಂಗಾತಿ ಜತೆಗೆ ಭಿನ್ನಾಭಿಪ್ರಾಯ ಅಥವಾ ವ್ಯತ್ಯಾಸಗಳು ಇದ್ದಲ್ಲಿ ನಿವಾರಣೆ ಆಗುತ್ತದೆ. ಶುಭದಿನ 7. ಕಾಲಭೈರವನ ಸೇವೆ ಮಾಡಿರಿ.




ನಿಮ್ಮ ಪ್ರೀತಿಪಾತ್ರರ ಜತೆಗಿನ ಬಾಂಧವ್ಯ ಗಟ್ಟಿಯಾಗಲಿದೆ. ವಾರದ ಮೊದಲ ಭಾಗದಲ್ಲಿ ನಿಮ್ಮ ಪಾಲಿಗೆ ಅದೃಷ್ಟ ಇರಲಿದೆ. ದೊಡ್ಡ ಮಟ್ಟದ ಪ್ರಶಸ್ತಿಗೆ ಪಾತ್ರರಾಗಲಿದ್ದೀರಿ. ಉದ್ಯೋಗಕ್ಕಾಗಿ ಹುಡುಕುತ್ತಿರುವವರಿಗೆ ಯಶಸ್ಸು ದೊರೆಯಲಿದೆ. ವೃತ್ತಿ ಜೀವನದಲ್ಲಿ ಉತ್ತಮ ಫಲಿತಾಂಶ ದೊರೆಯಲಿದೆ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಶುಭದಿನ 9. ಮಹಾಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವಾರದ ಶುರುವಿನಲ್ಲಿ ಆಸ್ತಿ ವಿಚಾರದಲ್ಲಿ ಲಾಭ ಪಡೆದುಕೊಳ್ಳುವ ಅವಕಾಶ ಹೆಚ್ಚಿದೆ. ವಿದೇಶಿ ವ್ಯವಹಾರ ಹಾಗೂ ಹಣಕಾಸು ವ್ಯವಹಾರಗಳಲ್ಲಿ ಸಕಾರಾತ್ಮಕ ಪ್ರಗತಿ ಇದೆ. ಆದರೆ ಆರೋಗ್ಯದಲ್ಲಿ ಏರುಪೇರು ಕಾಣಿಸಿಕೊಳ್ಳಲಿದೆ. ಕೌಟುಂಬಿಕ ವಿಚಾರದಲ್ಲಿ ಸಣ್ಣ– ಪುಟ್ಟ ಸಮಸ್ಯೆಯಾದರೂ ಎದುರಾಗಲಿದೆ. ಆಧ್ಯಾತ್ಮಿಕ ವಿಚಾರದ ಕಡೆಗೆ ಒಲವು ಹೆಚ್ಚಲಿದೆ. ಶುಭದಿನ 10. ಚಂಡಿ ಪಾರಾಯಣ ಮಾಡಿರಿ.




ಹಲವು ಕ್ಷೇತ್ರದಲ್ಲಿ ಅಂದುಕೊಂಡಂತ ಫಲಿತಾಂಶವನ್ನು ಸಾಧಿಸಲಿದ್ದೀರಿ. ವೃತ್ತಿಪರ ಗುರಿಯನ್ನು ಮುಟ್ಟಲು ಉತ್ಸಾಹದಿಂದ ಕೆಲಸ ಮಾಡಲಿದ್ದೀರಿ. ನಿಮ್ಮ ಪರಿಶ್ರಮವನ್ನು ಉದ್ಯೋಗ ಸ್ಥಳದಲ್ಲಿ ಮೇಲಧಿಕಾರಿಗಳು ಮೆಚ್ಚುತ್ತಾರೆ. ವೈವಾಹಿಕ ಜೀವನದಲ್ಲಿ ಮಧುರ ಕ್ಷಣಗಳಿವೆ. ಈ ವಾರ ನಿಮ್ಮ ವಿರೋಧಿಗಳಿಗೆ ತಕ್ಕ ಪ್ರತ್ಯುತ್ತರವನ್ನು ನೀಡಲಿದ್ದೀರಿ. ಶುಭದಿನ 8. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಕಾನೂನು ವಿಚಾರದಲ್ಲಿ ಪ್ರಗತಿ ಇದೆ. ವಿರೋಧಿಗಳ ವಿರುದ್ಧ ಪ್ರಬಲ ಕಾರ್ಯತಂತ್ರ ರೂಪಿಸಿ, ಮೇಲುಗೈ ಸಾಧಿಸುವಿರಿ. ವಾರದ ಆರಂಭದಲ್ಲಿ ಉದ್ಯೋಗ, ವ್ಯಾಪಾರದಲ್ಲಿ ಬಿಡುವಿಲ್ಲದಷ್ಟು ಕೆಲಸ ಕಾರ್ಯಗಳು ಬರಲಿವೆ. ಆರೋಗ್ಯಕ್ಕೆ ಸಂಬಂಧಿಸಿದಂತೆ ಸಮಸ್ಯೆಗಳು ಕಾಣಿಸಿಕೊಳ್ಳಬಹುದು. ಆರೋಗ್ಯ ಹಾಗೂ ದೈಹಿಕ ದೃಢತೆ ಉತ್ತಮವಾಗಿರುತ್ತದೆ. ಶುಭದಿನ 7. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ವಾರದ ಶುರುವಿನಿಂದಲೇ ಉತ್ತಮ ಫಲಿತಾಂಶ ಪಡೆಯುವಿರಿ. ಬೌದ್ಧಿಕ ಸಾಮರ್ಥ್ಯ ವೃದ್ಧಿ ಆಗಲಿದೆ. ಹೆಚ್ಚುವರಿ ಆದಾಯ ಮೂಲದಿಂದ ಅತ್ಯುತ್ತಮ ಪ್ರಮಾಣದ ಲಾಭವನ್ನು ನಿರೀಕ್ಷೆ ಮಾಡಬಹುದು. ವೈಯಕ್ತಿಕ ಸಂಬಂಧ ಮತ್ತಷ್ಟು ಗಟ್ಟಿಯಾಗಿ, ಸಂತೋಷದ ಕ್ಷಣಗಳನ್ನು ಕಳೆಯುವಿರಿ. ಈ ಹಿಂದಿನ ಮನಸ್ತಾಪ ಭಿನ್ನಾಭಿಪ್ರಾಯಗಳು ಕರಗಿ ಹೋಗುತ್ತವೆ. ಶುಭದಿನ 9. ದಕ್ಷಿಣಾಮೂರ್ತಿ ಸ್ತೋತ್ರ ಪಠಣ ಮಾಡಿರಿ.